ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆಃ ಕಾಶಿಇ/ಶೈವಿ/22/ಸುತ್ತೋಲೆ/2023-24 ದಿನಾಂಕ: 15.02.2024

# ಸುತ್ತೋಲೆ

ವಿಷಯಃ ಸಂವಿಧಾನ ಜಾಗೃತ ಜಾಥ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ.

ಉಲ್ಲೇಖಃ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ರವರ ಪತ್ರ ಸಂಖ್ಯೆ:ಪ್ರಚಾರ/ಸಿ.ಆರ್-06/2023-24 ದಿನಾಂಕ:31.01.2024.

* * * * * *

ಭಾರತ ಸಂವಿಧಾನ ಅಂಗೀಕರಿಸಿಕೊಂಡು 75ನೇ ವರ್ಷದ ಆಚರಣೆಯ ಪ್ರಯುಕ್ತ ಸಂವಿಧಾನ ಜಾಗೃತ ಜಾಥ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ದಿನಾಂಕ:26.01.2024 ರಿಂದ ದಿನಾಂಕ:25.02.2024 ರವರೆಗೆ ಹಮ್ಮಿಕೊಳ್ಳಲಾಗಿರುತ್ತದೆ.

ತತ್ಸಂಬಂಧವಾಗಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಂವಿಧಾನದ ಮಹತ್ವವನ್ನು ತಿಳಿಸುವ ಸಂಬಂಧ ದಿನಾಂಕ:26.01.2024 ರಿಂದ 25.02.2024 ರವರೆಗೆ ಪ್ರಬಂಧಸ್ಪರ್ಧೆ, ರಸಪ್ರಶ್ನೆ ಕಾರ್ಯಕ್ರಮ, ಚರ್ಚಾ ಸ್ಪರ್ಧೆ, ಸಂವಿಧಾನದ ಕುರಿತು ಸಾಕ್ಷಚಿತ್ರ ಪ್ರದರ್ಶನ, ವಿಚಾರಗೋಷ್ಠಿ ಹಾಗೂ ಇನ್ನಿತರ ಸಂವಿಧಾನ ಜಾಗೃತಿಯ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಂವಿಧಾನ ಜಾಗೃತ ಜಾಥ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಅಗತ್ಯ ಕ್ರಮವಹಿಸುವಂತೆ ತಿಳಿಸಲಾಗಿದೆ ಹಾಗೂ ಕೈಗೊಂಡ ಕ್ರಮದ ಕುರಿತು ವರದಿಯನ್ನು ಜಂಟಿ ನಿರ್ದೇಶಕರ ಮುಖಾಂತರ ಆಯುಕ್ತರ ಕಛೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

15/2/2024
ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
3. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ

ಪ್ರತಿಯನ್ನು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಸಹಕಾರ ಇಲಾಖೆ, ಬೆಂಗಳೂರು-560 001.
2. ಆಯುಕ್ತರ, ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ, ಹೆಚ್ಚುವರಿ ನಿರ್ದೇಶಕರ' ಹಾಗೂ ಜಂಟಿ ನಿರ್ದೇಶಕರುಗಳ ಆಪ್ತ ಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
3. ಕಛೇರಿ ಪ್ರತಿ.